ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

25.07.2025 19.35 hrs

<><*<><>*><>

<u>ಮುಖ್ಯಾಂಶಗಳು</u>

- ಮಾಲ್ಡೀವ್ಸ್‌ಗೆ ೪ ಸಾವಿರದ ೮೫೦ ಕೋಟಿ ರೂಪಾಯಿಗಳ ಸಾಲದ ನೆರವು ನೀಡಿದ ಭಾರತ
- ವಾಯು ರಕ್ಷಣಾ ಅಗ್ನಿಶಾಮಕ ನಿಯಂತ್ರಣಾ ರಾಡಾರ್‌ಗಳ ಖರೀದಿಗಾಗಿ ಬಿಇಎಲ್ ನೊಂದಿಗೆ ರಕ್ಷಣಾ ಸಚಿವಾಲಯ ಒಪ್ಪಂದ
- ವಿಪಕ್ಷಗಳಿಂದ ಮುಂದುವರಿದ ಗದ್ದಲ: ಸಂಸತ್ತಿನ ಉಭಯ ಸದನಗಳ ಕಲಾಪ ಸೋಮವಾರಕ್ಕೆ ಮುಂದೂಡಿಕೆ
- ಮನ್ ಕಿ ಬಾತ್: ಇದೇ ೨೭ ರಂದು ಭಾರತೀಯ ಸಮುದಾಯದೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮನದಾಳದ ಮಾತು

<><*<><>*><>

ಭಾರತವು ಮಾಲ್ಡೀವ್ಸ್‌ಗೆ ೪ ಸಾವಿರದ ೮೫೦ ಕೋಟಿ ರೂಪಾಯಿಗಳ ಸಾಲದ ನೆರವನ್ನು ನೀಡಿದೆ. ಈ ಹಣಕಾಸಿನ ನೆರವು ಮಾಲ್ಡೀವ್ಸ್‌ನಲ್ಲಿ ಪ್ರಮುಖ ಮೂಲಸೌಕರ್ಯ ಮತ್ತು ಅಭಿವೃದ್ಧಿ ಯೋಜನೆಗಳಿಗೆ ಅನುದಾನ ಒದಗಿಸುವ ನಿರೀಕ್ಷೆಯಿದೆ. ಇದೇ ವೇಳೆ ಉಭಯ ದೇಶಗಳು ಇಂದು ಇಟ್ಟು ೭ ಒಪ್ಪಂದಗಳಿಗೆ ಸಹಿ ಹಾಕಿವೆ. ಮೀನುಗಾರಿಕೆ, ಜಲಚರ ಸಾಕಣೆ, ಡಿಜಿಟಲ್ ಪರಿಹಾರ ಮತ್ತು ಭಾರತೀಯ ಔಷಧಶಾಸ್ತ್ರ ಕ್ಷೇತ್ರಗಳಿಗೆ ಸಂಬಂಧಿಸಿದ್ದಾಗಿವೆ. ಮಾಲ್ಡೀವ್ಸ್ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಮಾಲ್ಡೀವ್ಸ್ ಅಧ್ಯಕ್ಷ ಡಾ.ಮೊಹಮ್ಮದ್ ಮುಯಿಝು ಅವರೊಂದಿಗೆ ನಿಯೋಗಮಟ್ಟದ ಮಾತುಕತೆ ನಡೆಸಿದರು. ಈ ವೇಳೆ, ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್, ರಾಷ್ಟ್ರೀಯ ಭದ್ರತೆ ಸಲಹೆಗಾರ ಅಜಿತ್ ದೋವಲ್ ಸೇರಿದಂತೆ ಉಭಯ ದೇಶಗಳ ಅಧಿಕಾರಿಗಳು ಉಪಸ್ಥಿತರಿದ್ದರು. ನಿಯೋಗಮಟ್ಟದ ಮಾತುಕತೆಗೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು, ಮಾಲ್ಡೀವ್ಸ್ ಅಧ್ಯಕ್ಷರೊಂದಿಗೆ ಪರಸ್ಪರ ಆಸಕ್ತಿಯ ವಿವಿಧ ವಿಷಯಗಳ ಬಗ್ಗೆ ಚರ್ಚಿಸಿದರು.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೨೪ ಸೆಕೆಂಡ್ಸ್)

ಇದಕ್ಕೂ ಮೊದಲು ಯಶಸ್ವಿ ಬ್ರಿಟನ್ ಪ್ರವಾಸ ಸಂಪನ್ನಗೊಳಿಸಿದ ನಂತರ ಎರಡು ದಿನಗಳ ಮಾಲ್ಡೀವ್ಸ್ ಭೇಟಿಗಾಗಿ ಇಂದು ಮಾಲ್ಡೀವ್ಸ್ ರಾಜಧಾನಿ ಮಾಲೆಗೆ ಆಗಮಿಸಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ವೆಲನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಮಾಲ್ಡೀವ್ಸ್ ಅಧ್ಯಕ್ಷ ಡಾ.ಮೊಹಮದ್ ಮುಯಿಝು ಬರಮಾಡಿಕೊಂಡರು. ಬಳಿಕ ಪ್ರಧಾನಿ ಅವರಿಗೆ ಭಾರತದ ಪಾರಂಪಾರಿಕ ನೃತ್ಯ ಪ್ರದರ್ಶನದ ಮೂಲಕ ಭವ್ಯ ಸ್ವಾಗತ ಕೋರಲಾಯಿತು. ೨೦೨೩ರ ನವೆಂಬರ್‌ನಲ್ಲಿ ಅಧ್ಯಕ್ಷ ಡಾ. ಮೊಹಮದ್ ಮುಯಿಝು ಅಧಿಕಾರಕ್ಕೆ ಬಂದ ನಂತರ ಪ್ರಧಾನಿ ಮೋದಿಯವರ ಮೊದಲ ಹಾಗೂ ಒಟ್ಟಾರೆ ಮೂರನೇ ಭೇಟಿ ಇದಾಗಿದೆ. ನಾಳೆ, ಪ್ರಧಾನಿ ಅವರು ಮಾಲ್ಡೀವ್ಸ್‌ನ ೬೦ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಗೌರವ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಪ್ರಸಕ್ತ ವರ್ಷ, ಭಾರತ ಮತ್ತು ಮಾಲ್ಡೀವ್ಸ್ ನಡುವೆ ರಾಜತಾಂತ್ರಿಕ ಸಂಬಂಧ ಸ್ಥಾಪನೆಯ ೬೦ನೇ ವಾರ್ಷಿಕೋತ್ಸವೂ ಆಗಿದೆ.

<><*<><>*><>

ಭಾರತೀಯ ಸೇನೆಗೆ ೨ ಸಾವಿರ ಕೋಟಿ ರೂಪಾಯಿ ಮೌಲ್ಯದ ವಾಯು ರಕ್ಷಣಾ ಅಗ್ನಿಶಾಮಕ ನಿಯಂತ್ರಣಾ ರಾಡಾರ್‌ಗಳ ಖರೀದಿಗಾಗಿ ರಕ್ಷಣಾ ಸಚಿವಾಲಯವು ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್‌ನೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿದೆ. ಈ ವಾಯು ರಕ್ಷಣಾ ಅಗ್ನಿಶಾಮಕ ನಿಯಂತ್ರಣಾ

ರಾಡಾರ್‌ಗಳು, ಯುದ್ಧ ವಿಮಾನಗಳು, ಯುದ್ಧ ಹೆಲಿಕಾಪ್ಟರ್‌ಗಳು, ಶತ್ರು ಡ್ರೋನ್‌ಗಳು ಸೇರಿದಂತೆ ಎಲ್ಲಾ ರೀತಿಯ ವಾಯು ಬೆದರಿಕೆಗಳನ್ನು ಪತ್ತೆಹಚ್ಚಲು ಸಹಾಯಕವಾಗಿವೆ.

ಇದು ಭಾರತೀಯ ವಾಯುಪಡೆಯನ್ನು ಆಧುನೀಕರಣಗೊಳಿಸುವಲ್ಲಿ ಮಹತ್ವದ ಮೈಲಿಗಲ್ಲಾಗಿದೆ. ಅಲ್ಲದೆ, ಭಾರತೀಯ ಸೇನೆಯ ಕಾರ್ಯಾಚರಣೆಯ ಸಿದ್ಧತೆಯನ್ನು ಇದು ಹೆಚ್ಚಿಸುತ್ತದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ನವದೆಹಲಿಯಲ್ಲಿಂದು ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರ ಸಮ್ಮುಖದಲ್ಲಿ ರಕ್ಷಣಾ ಸಚಿವಾಲಯ ಮತ್ತು ಬಿಇಎಲ್ ನ ಹಿರಿಯ ಅಧಿಕಾರಿಗಳು ಒಪ್ಪಂದಕ್ಕೆ ಸಹಿ ಹಾಕಿದರು ಹಾಗೂ ಒಪ್ಪಂದವನ್ನು ಪರಸ್ಪರ ವಿನಿಮಯ ಮಾಡಿಕೊಂಡರು.

<><*<><>*><>

ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ವಿರೋಧ ಪಕ್ಷಗಳು ಗದ್ದಲ ಸೃಷ್ಟಿಸಿದ ಹಿನ್ನೆಲೆಯಲ್ಲಿ ಸಂಸತ್ತಿನ ಉಭಯ ಸದನಗಳನ್ನು ಸೋಮವಾರಕ್ಕೆ ಮುಂದೂಡಲಾಯಿತು. ದಿನದಲ್ಲಿ ಮೊದಲ ಮುಂದೂಡಿಕೆಯ ನಂತರ ಮಧ್ಯಾಹ್ನ ೨ ಗಂಟೆಗೆ ಲೋಕಸಭೆಯಲ್ಲಿ ಸದನ ಸೇರಿದಾಗ ವಿರೋಧ ಪಕ್ಷದ ಸದಸ್ಯರು ತಮ್ಮ ಪ್ರತಿಭಟನೆಯನ್ನು ಮುಂದುವರಿಸಿದರು. ಇದರಿಂದಾಗಿ ಸದನದ ಕಲಾಪಗಳಿಗೆ ಅಡ್ಡಿಯಾಯಿತು. ವಿರೋಧ ಪಕ್ಷದ ಸದಸ್ಯರು ತಮ್ಮ ಸ್ಥಾನಗಳಿಗೆ ಹಿಂತಿರುಗಿ ಸುಗಮ ಕಲಾಪಕ್ಕೆ ಅವಕಾಶ ನೀಡುವಂತೆ ಸ್ಪೀಕರ್ ಸ್ಥಾನದಲ್ಲಿದ್ದ ಬಿಜೆಪಿ ಸಂಸದ ಜಗದಾಂಬಿಕಾ ಪಾಲ್ ಮನವಿ ಮಾಡಿದರು. ಈ ನಡುವೆ, ಗೋವಾ ವಿಧಾನಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಪಂಗಡಗಳ ಪ್ರಾತಿನಿಧ್ಯ ಮರು ಹೊಂದಾಣಿಕೆ ವಿಧೇಯಕ-೨೦೨೪ ರ ಕುರಿತು ಮಾತನಾಡಲು ಅವಕಾಶ ನೀಡಬೇಕು ಎಂದು ಕೇಂದ್ರ ಕಾನೂನು ಸಚಿವ ಅರ್ಜುನ್ ಮೇಘವಾಲ್ ಹೇಳಿದರು. ಆದರೆ, ವಿರೋಧ ಪಕ್ಷದ ಸದಸ್ಯರು ತಮ್ಮ ಪ್ರತಿಭಟನೆ ಮುಂದುವರಿಸಿದರು. ಪದೇ ಪದೆ ಮನವಿ ಮಾಡಿದರೂ ವಿಪಕ್ಷಗಳು ಗದ್ದಲ ಮುಂದುವರಿಸಿದ್ದರಿಂದ ಸದನವನ್ನು ಸೋಮವಾರಕ್ಕೆ ಮುಂದೂಡಲಾಯಿತು. ಇದಕ್ಕೂ ಮುನ್ನ ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಷ್ಟ್ರ ರಕ್ಷಣೆಗೆ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಭಾರತೀಯ ಸಶಸ್ತ್ರ ಪಡೆಗಳ ಹುತಾತ್ಮ ಯೋಧರ ಧೈರ್ಯ ಮತ್ತು ಸಾಹಸವನ್ನು ಸ್ಮರಿಸಿದರು. ತೀವ್ರ ಹವಾಮಾನ ಪರಿಸ್ಥಿತಿ ಮತ್ತು ಕಠಿಣ ಭೂ ಪ್ರದೇಶದಲ್ಲಿ ಎದುರಾಳಿ ಸೈನಿಕರನ್ನು ಎದುರಿಸಿ, ವಿಜಯಶಾಲಿಯಾದ ವೀರ ಯೋಧರಿಗೆ ಸದನ ಗೌರವ ಸೂಚಿಸಿ, ಹುತಾತ್ಮ ಯೋಧರ ಗೌರವಾರ್ಥ ಮೌನ ಆಚರಿಸಿತು. ಬಳಿಕ ಸಭಾಧ್ಯಕ್ಷ ಓಂ ಬಿರ್ಲಾ ಪ್ರಶ್ನೋತ್ತರ ಕಲಾಪ ಕೈಗೆತ್ತಿಕೊಂಡು. ಆದರೆ ಪ್ರತಿಪಕ್ಷ ಸದಸ್ಯರು ಸದನದ ಬಾವಿಗಿಳಿದು ಬಿಹಾರದ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಾಚರಣೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಮುಕ್ತ ಚರ್ಚೆಗೆ ಅವಕಾಶ ಮಾಡಿಕೊಡಲು ಆಗ್ರಹಿಸಿ ಘೋಷಣೆಗಳನ್ನು ಕೂಗುತ್ತಾ ಪ್ರತಿಭಟನೆ ನಡೆಸಿದರು. ಈ ವೇಳೆ ಸಭಾಧ್ಯಕ್ಷರು, ಸದನದ ಕಾರ್ಯಕಲಾಪವನ್ನು ಉದ್ದೇಶ ಪೂರ್ವಕವಾಗಿ ಅಡ್ಡಿ ಪಡಿಸಲಾಗುತ್ತಿರುವುದನ್ನು ಗಮನಿಸಲಾಗಿದೆ. ಈ ವರ್ತನೆ ಸದನ ಹಾಗೂ ಪ್ರಜಾಪ್ರಭುತ್ವ ವ್ಯವಸ್ಥೆಗೆ ಶೋಭೆ ತರುವುದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಆದರೂ ಪ್ರತಿಪಕ್ಷಗಳ ಗದ್ದಲ ಮುಂದುವರಿದ ಬೆನ್ನಲ್ಲೇ ಸದನವನ್ನು ಮುಂದೂಡಲಾಯಿತು. ರಾಜ್ಯಸಭೆಯಲ್ಲಿಂದು ವಿವಿಧ ವಿಷಯಗಳ ಮುಕ್ತ ಚರ್ಚೆಗೆ ಆಗ್ರಹಿಸಿ ವಿರೋಧ ಪಕ್ಷಗಳು ಗದ್ದಲ ಎಬ್ಬಿಸಿದ ಬೆನ್ನಲ್ಲೇ ಕಲಾಪವನ್ನು ದಿನದ ಮಟ್ಟಿಗೆ ಮುಂದೂಡಲಾಗಿದೆ. ಮೊದಲ ಬಾರಿಗೆ ಮುಂದೂಡಲ್ಪಟ್ಟು, ೧೨ ಗಂಟೆಗೆ ಸದನ ಪುನಃ ಸಭೆ ಸೇರಿದಾಗ ಸಭಾಪತಿ ಸ್ಥಾನದಲ್ಲಿದ್ದ ಘನಶ್ಯಾಮ ತಿವಾರಿ ಪ್ರಶ್ನೋತ್ತರ ಕಲಾಪ ಕೈಗೊಳ್ಳಲು ಪ್ರಯತ್ನಿಸಿದರಾದರೂ ಪ್ರತಿಪಕ್ಷಗಳ ಗದ್ದಲ ಮುಂದುವರೆಯಿತು. ಇದರ ಬೆನ್ನಲ್ಲೇ ಸದನವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು. ಬೆಳಗ್ಗೆ ಕಲಾಪ ಆರಂಭವಾದಾಗ ರಾಜ್ಯಸಭೆಗೆ ನೂತನವಾಗಿ ಆಯ್ಕೆಯಾಗಿರುವ ಸದಸ್ಯರಾದ ಕಮಲ್‌ಹಾಸನ್, ರಜತಿ, ಎಸ್.ಆರ್.ಸಿವಲಂಗಂ ಮತ್ತು ಪಿ.ವಿಲ್ಸನ್ ಪ್ರಮಾಣ ವಚನ ಸ್ವೀಕರಿಸಿದರು.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇದೇ ೨೭ ರಂದು ಭಾನುವಾರ ಬೆಳಗ್ಗೆ ೧೧ ಗಂಟೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೪ನೇ ಆವೃತ್ತಿಯಾಗಿದೆ. ಕಾರ್ಯಕ್ರಮಕ್ಕೆ ನಿಮ್ಮ ಸಲಹೆ, ಅಭಿಪ್ರಾಯಗಳನ್ನು ನೀಡಲು ಉಚಿತ ದೂರವಾಣಿ ಸಂಖ್ಯೆ ೧೮೦೦-೧೧-೭೮೦೦ ಗೆ ಕರೆ ಮಾಡಬಹುದು.

ಇಲ್ಲವೇ ನಮೋ ಆಪ್ ಅಥವಾ ಮೈ ಜಿಒವಿ ಡಾಟ್ ಇನ್ ವೇದಿಕೆಯ ಮೂಲಕ ಹಂಚಿಕೊಳ್ಳಲು ಇಂದು ಕೊನೆಯ ದಿನವಾಗಿದೆ.

<><*<><>*><>

ವಿಕಸಿತ ಕೃಷಿ ಸಂಕಲ್ಪ ಅಭಿಯಾನದಡಿ ಮೊದಲ ಬಾರಿಗೆ ೨ ಸಾವಿರಕ್ಕೂ ಹೆಚ್ಚು ವಿಜ್ಞಾನಿಗಳ ತಂಡ ೭ ಸಾವಿರದ ೯೦೦ ಕ್ಕೂ ಹೆಚ್ಚು ಹಳ್ಳಿಗಳಿಗೆ ಭೇಟಿ ನೀಡಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್ ತಿಳಿಸಿದ್ದಾರೆ. ರಾಜ್ಯಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ವಿಜ್ಞಾನಿಗಳು ಪ್ರತಿ ಹಳ್ಳಿಯ ಕೃಷಿ-ಹವಾಮಾನ ಪರಿಸ್ಥಿತಿಗಳ ಬಗ್ಗೆ ವಿವರವಾದ ಮಾಹಿತಿಯನ್ನು ಸಂಗ್ರಹಿಸಿದ್ದಾರೆ. ಅಲ್ಲದೆ, ಮಣ್ಣಿನ ಪೋಷಕಾಂಶಗಳು, ಸೂಕ್ತವಾದ ಬೀಜ ಪ್ರಭೇದಗಳು ಮತ್ತು ಕೃಷಿ ತಂತ್ರಜ್ಞಾನದ ಕುರಿತು ರೈತರಿಗೆ ಅರಿವು ಮೂಡಿಸಲಾಗಿದೆ ಎಂದು ಮಾಹಿತಿ ನೀಡಿದರು.

<><*<><>*><>

ಬಿಹಾರದಲ್ಲಿ ಮತದಾರರ ವಿಶೇಷ ಪರಿಷ್ಕರಣೆ ಉಪಕ್ರಮದಡಿಯಲ್ಲಿ ಶೇಕಡಾ ೯೯.೮ ಕ್ಕೂ ಹೆಚ್ಚು ಮತದಾರರನ್ನು ಪರಿಷ್ಕರಿಸಲಾಗಿದೆ ಎಂದು ಭಾರತೀಯ ಚುನಾವಣಾ ಆಯೋಗ ತಿಳಿಸಿದೆ. ಮತದಾರರ ಪೈಕಿ, ೨೨ ಲಕ್ಷ ಮತದಾರರು ಮೃತಪಟ್ಟಿದ್ದಾರೆ. ೩೫ ಲಕ್ಷಕ್ಕೂ ಹೆಚ್ಚು ಜನರು ಶಾಶ್ವತವಾಗಿ ವಲಸೆ ಹೋಗಿದ್ದಾರೆ. ೭ ಲಕ್ಷ ಮತದಾರರು ಒಂದಕ್ಕಿಂತ ಹೆಚ್ಚು ಸ್ಥಳಗಳಲ್ಲಿ ತಮ್ಮ ಹೆಸರನ್ನು ದಾಖಲಿಸಿದ್ದಾರೆ. ಸುಮಾರು ೧ ಲಕ್ಷ ೨೦ ಸಾವಿರ ಮತದಾರರು ಇನ್ನೂ ಅರ್ಜಿ ನಮೂನೆಯನ್ನು ಸಲ್ಲಿಸಿಲ್ಲ. ಆಗಸ್ಟ್ ೧ ರಂದು ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಲಾಗುವುದು ಎಂದು ಚುನಾವಣಾ ಆಯೋಗ ಮಾಹಿತಿ ನೀಡಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>